**ವಿಧಾನ ಪರಿಷತ್ತಿನ ಮಾನ್ಯ ಸದಸ್ಯರುಗಳಾದ ಶ್ರೀ ಛಲವಾದಿ.ಟಿ ನಾರಾಯಣಸ್ವಾಮಿ, ಶ್ರೀ ಸಿ.ಎನ್.ಮಂಜೇಗೌಡ, ಶ್ರೀ ನಿರಾಣಿ ಹಣಮಂತ ರುದ್ರಪ್ಪ ಹಾಗೂ ಶ್ರೀ ಕೇಶವ ಪ್ರಸಾದ್ ಎಸ್., ಇವರ ನಿಯಮ 330ರ ಗಮನ ಸೆಳೆಯುವ ಸೂಚನೆಗೆ ಉತ್ತರ.**

**ಸೂಚನೆ**

ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗಗಳ ಕಲ್ಯಾಣಕ್ಕಾಗಿ 2023-24 ನೇ ಸಾಲಿನಲ್ಲಿ ಎಸ್.ಸಿ.ಎಸ್.ಪಿ/ಟಿ.ಎಸ್.ಪಿ ಯೋಜನೆಯಡಿ ಮೀಸಲಿಟ್ಟ ಅನುದಾನವನ್ನು ರಾಜ್ಯ ಸರ್ಕಾರವು ವಿವಿಧ ಯೋಜನೆಗಳ ಅನುಷ್ಠಾನಕ್ಕಾಗಿ ಬಳಕೆ ಮಾಡಿಕೊಳ್ಳಲು ಉದ್ದೇಶಿಸಿರುವುದರಿಂದ ದಲಿತರಿಗೆ ಅನ್ಯಾಯ ಮಾಡಿದಂತಾಗುತ್ತದೆ. ಪರಿಶಿಷ್ಟರ ಕಲ್ಯಾಣಕ್ಕಾಗಿ ಮೀಸಲಿಟ್ಟ ಹಣವನ್ನು ಅನ್ಯ ಉದ್ದೇಶಕ್ಕಾಗಿ ಬಳಸುವುದು ಎಸ್.ಸಿ.ಎಸ್.ಪಿ/ಟಿ.ಎಸ್.ಪಿ ಯೋಜನೆಯನ್ನು ದುರ್ಬಳಕೆ ಮಾಡಿದಂತಾಗಿ, ಎಸ್.ಸಿ.ಎಸ್.ಪಿ/ಟಿ.ಎಸ್.ಪಿ ಕಾಯ್ದೆಯ ಉಲ್ಲಂಘನೆಯಾಗಿರುತ್ತದೆ. ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗಗಳ ಶ್ರೇಯೋಭಿವೃದ್ಧಿಗೆ ಬಳಕೆ ಮಾಡಬೇಕಾದ ಅನುದಾನಕ್ಕೆ ಕೊಕ್ಕೆ ಹಾಕಿ ಸರ್ಕಾರದ ವಿವಿಧ ಯೋಜನೆಗಳಿಗೆ ಅನುದಾನವನ್ನು ಬಳಕೆ ಮಾಡುವುದರಿಂದ ತಳಸಮುದಾಯಗಳ ಅಭಿವೃದ್ಧಿ ಹಿನ್ನಡೆಯಾಗುತ್ತದೆ. 7ಡಿ ಕಾಯ್ದೆಯನ್ನು ತೆಗೆದು ಎಸ್.ಸಿ.ಎಸ್.ಪಿ/ಟಿ.ಎಸ್.ಪಿ ಯೋಜನೆಯಡಿ ಮೀಸಲಿಟ್ಟ ಅನುದಾನವನ್ನು ಯಾವುದಕ್ಕೂ ವರ್ಗಾವಣೆ ಮಾಡುವುದಿಲ್ಲ ಎಂದು ಆಶ್ವಾಸನೆ ನೀಡಿದ ಸರ್ಕಾರ 11 ಸಾವಿರ ಕೋಟಿಗಳಿಗೂ ಅಧಿಕ ಮೊತ್ತವನ್ನು ವಿವಿಧ ಯೋಜನೆಗಳ ಅನುಷ್ಠಾನಕ್ಕೆ ವರ್ಗಾವಣೆ ಮಾಡಿರುವುದರಿಂದ ದಲಿತರ ಶ್ರೇಯೋಭಿವೃದ್ಧಿಗೆ ಹಿನ್ನಡೆಯಾಗುತ್ತದೆ. ಅನ್ಯ ಉದ್ದೇಶಕ್ಕೆ ಮತ್ತು ವಿವಿಧ ಯೋಜನೆಗಳ ಅನುಷ್ಠಾನಕ್ಕೆ ಬಳಕೆ ಮಾಡಿರುವ ಹಣವನ್ನು ಮತ್ತೆ ಎಸ್.ಸಿ.ಎಸ್.ಪಿ/ಟಿ.ಎಸ್.ಪಿ ಯೋಜನೆಯಲ್ಲಿ ವಿನಿಯೋಗ ಮಾಡಲು ಸರ್ಕಾರ ಕ್ರಮ ತೆಗೆದುಕೊಳ್ಳುವಂತೆ ಮತ್ತು ತಳಸಮುದಾಯಗಳಿಗೆ ಅನ್ಯಾಯವಾಗದಂತೆ ಸೂಕ್ತ ಕ್ರಮವಹಿಸುವ ನಿಟ್ಟಿನಲ್ಲಿ ಸದನದಲ್ಲಿ ಪ್ರಸ್ತಾಪಿಸಬಯಸುತ್ತೇನೆ.

**ಉತ್ತರ**

ಎಸ್.ಸಿ.ಎಸ್.ಪಿ/ಟಿ.ಎಸ್.ಪಿ ಅಧಿನಿಯಮ 2013 ಮತ್ತು ನಿಯಮಗಳು 2017ರಲ್ಲಿ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ಜನರಿಗೆ ನೇರವಾಗಿ ಪ್ರಯೋಜನವಾಗುವ ಕಾರ್ಯಕ್ರಮಗಳಿಗೆ ಎಸ್.ಸಿ.ಎಸ್.ಪಿ/ಟಿ.ಎಸ್.ಪಿ ಅನುದಾನವನ್ನು ಹಂಚಿಕೆ ಮಾಡಿ ಅನುಷ್ಠಾನಗೊಳಿಸಲು ಅವಕಾಶವಿದೆ.

ಎಸ್.ಸಿ.ಎಸ್.ಪಿ/ಟಿ.ಎಸ್.ಪಿ ಅನುದಾನವನ್ನು ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದವರ ಅಭಿವೃದ್ಧಿಗೆ ವಿನಿಯೋಗಿಸುತ್ತಿರುವ ಕಾರಣ ಅನ್ಯ ಉದ್ದೇಶಕ್ಕಾಗಿ ಅನುದಾನ ಬಳಸಿರುವುದಿಲ್ಲ. ಆದ್ದರಿಂದ ಎಸ್.ಸಿ.ಎಸ್.ಪಿ/ಟಿ.ಎಸ್.ಪಿ ಕಾಯ್ದೆಯ ಉಲ್ಲಂಘನೆಯ ಪ್ರಶ್ನೆ ಉದ್ಭವಿಸುವುದಿಲ್ಲ.

ಗ್ಯಾರಂಟಿ ಯೋಜನೆಗಳಡಿ ಎಸ್.ಸಿ.ಎಸ್.ಪಿ/ಟಿ.ಎಸ್.ಪಿ ಅಡಿ ಒದಗಿಸಿರುವ ಅನುದಾನವನ್ನು ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದವರಿಗೆ ಉಪಯೋಗಿಸುತ್ತಿರುವ ಕಾರಣ ಇದರಿಂದ ಯಾವುದೇ ಅನ್ಯಾಯವಾಗುವುದಿಲ್ಲ.

ಪರಿಶಿಷ್ಟ ಜಾತಿ/ ಪರಿಶಿಷ್ಟ ಪಂಗಡದವರ ಹಿತದೃಷ್ಟಿಯಿಂದ ಎಸ್.ಸಿ.ಎಸ್.ಪಿ/ಟಿ.ಎಸ್.ಪಿ ಕಾಯ್ದೆ 2013ರ ಸೆಕ್ಷನ್ 7(ಡಿ) ಯನ್ನು ಈಗಾಗಲೇ ರದ್ದುಪಡಿಸಿ ಕಾಯ್ದೆಗೆ ತಿದ್ದುಪಡಿ ತರಲಾಗಿದೆ. ಇದರ ಪರಿಣಾಮವಾಗಿ ಭಾರೀ ನೀರಾವರಿ, ಲೋಕೋಪಯೋಗಿ, ನಗರಾಭಿವೃದ್ಧಿ, ಸಣ್ಣ ನೀರಾವರಿ ಇತ್ಯಾದಿ ಇಲಾಖೆಗಳಿಗೆ ಕಾಮಗಾರಿಗಳಿಗಾಗಿ ಹಂಚಿಕೆ ಮಾಡುತ್ತಿದ್ದ ಅನುದಾನವನ್ನು ಕಡಿತಗೊಳಿಸಿ, ಫಲಾನುಭವಿ ಆಧಾರಿತ ಕಾರ್ಯಕ್ರಮಗಳಿಗೆ ಹೆಚ್ಚಿನ ಅನುದಾನವನ್ನು ಹಂಚಿಕೆ ಮಾಡಲಾಗಿದೆ.

**ಸಕಇ 67 ಎಸ್ಎಲ್‌ಪಿ 2024**

**(ಡಾ: ಹೆಚ್.ಸಿ.ಮಹದೇವಪ್ಪ)**
**ಸಮಾಜ ಕಲ್ಯಾಣ ಸಚಿವರು**

ಡಾ॥ ಹೆಚ್.ಸಿ. ಮಹದೇವಪ್ಪ
ಸಮಾಜ ಕಲ್ಯಾಣ ಸಚಿವರು